- 3 -
ಸಿ.ಸಿ. ಸಂಖ್ಯೆ 43 / 2024
ಸಿಡಬ್ಲ್ಯೂ -2/ಪಿ.ಡಬ್ಲ್ಯೂ -02

ದಿನಾಂಕಃ 28.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ವಾಟೀ ಸವಾಲು ಃ- ಶ್ರೀ ಹೆಚ್ ಎನ್ ಎಸ್. ಆರೋಪಿ ಪರ ವಕೀಲರಿಂದ .

ಚಾಸಾ 1 ರವರು ದೂರನ್ನು ಕೊಟ್ಟ ಬಗ್ಗೆ ತಿಳಿದುಕೊಂಡಿರುತ್ತೀರಾ ಎಂದರೆ ಸಾಕ್ಷಿ ಗೊತ್ತು ಎಂದು ನುಡಿಯುತ್ತಾರೆ. ದೂರನ್ನು ಕೊಡುವ ಮೊದಲು ಚಾಸಾ 1 ಮತ್ತು ಆರೋಪಿಗಳ ನಡುವೆ ಸಿವಿಲ್ ದಾವೆ ನಡೆಯುತ್ತಿತ್ತು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಸದರಿ ದಾವೆಯನ್ನು ದಾಖಲಿಸಲು ಮೂಲ ಕಾರಣ ಕೆಂಪಯ್ಯ ರವರ ಹೆಸರಿಗೆ 2 ಎಕರೆ ಮಾಡಿಸಿಕೊಂಡಿದ್ದು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಸದರಿ ಖಾತೆಯನ್ನು ಆರೋಪಿಗಳು ವಜಾ ಮಾಡಿಸಿರುತ್ತಾರೆ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಅದಾದ ನಂತರವೆ ನೀವು ಕೋರ್ಟಿನಲ್ಲಿ ಕೇಸ್ ಹಾಕಿರುತ್ತೀರಿ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಆಗಿನಿಂದ ನಿಮಗೂ ಮತ್ತು ಆರೋಪಿಗಳ ನಡುವೆ ಮಾತುಕತೆ ಇರುವುದಿಲ್ಲ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ.

ಘಟನೆ ನಡೆದಿರುತ್ತದೆ ಎಂದು ಹೇಳಿದ್ದು ಯಾವ ದಿನಾಂಕ ಎಂದರೆ ಸಾಕ್ಷಿ ದಿನಾಂಕ 27.08.2023 ಎಂದು ನುಡಿಯುತ್ತಾರೆ. ಎಷ್ಟು ಗಂಟೆಗೆ ಎಂದು ಹೇಳಲು ಬರುತ್ತದೆಯೆ ಎಂದರೆ ಸಾಕ್ಷಿ ಬೆಳಿಗ್ಗೆ 7.30 ಕ್ಕೆ ಎಂದು ನುಡಿಯುತ್ತಾರೆ. ಆರೋಪಿಗಳು ಜಾಗಕ್ಕೆ ಹೋಗದಂತೆ ತಡೆ ಹಿಡಿದಿದ್ದರು ಎಂದು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಆರೋಪಿಗಳು ಕರಿಮಣಿ ಸರ ಕಿತ್ತಿರುತ್ತಾರೆ ಹಾಗೂ ಕಿತ್ತಿರುತ್ತಾರೆ ಎಂದು ಹೇಳಿರುತ್ತೀರಿ ಎಂದರೆ ಸಾಕ್ಷಿ ಓಲೆ ಇದ್ದಿರಲಿಲ್ಲ ಕರಿಮಣಿ

ಸರ ಕಿತ್ತು ಹಾಕಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಕರಿಮಣಿ ಸರ ಮತ್ತು ಓಲೆ ನಿಮ್ಮ ಬಳಿ ಇತ್ತು ಎಂದು ತೋರಿಸಲು ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಕೊಟ್ಟಿದೆ ಎಂದು ನುಡಿಯುತ್ತಾರೆ. ಗಲಾಟೆ ಆದ ಸಮಯದಲ್ಲಿ ಅವುಗಳನ್ನು ಕಳೆದುಕೊಂಡಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಯಾವುದೇ ರೀತಿ ಗಲಾಟೆ ಆಗಿರುವುದಿಲ್ಲ ನೀವು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

ನೀವು ಯಾವಾಗ ಚಿಕಿತ್ಸೆ ಪಡೆದಿರುತ್ತೀರಿ ಎಂದರೆ ಸಾಕ್ಷಿ ಗಲಾಟೆ ಆದ ದಿನವೆ ಚಿಕಿತ್ಸೆ ಪಡೆದಿರುತ್ತೇವೆ ಎಂದು ನುಡಿಯುತ್ತಾರೆ. ದಿನಾಂಕ 10.11.2023 ರಂದು ನೀವು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೀರಿ ಎಂದು ಹೇಳುತ್ತಾರೆ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ನಿಮ್ಮ ದೂರಿನಲ್ಲಿ ಹೇಳಿರುವ ಘಟನೆ ದಿನಾಂಕ , ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಘಟನೆ ದಿನಾಂಕ , ಗಾಯದ ಪ್ರಮಾಣಪತ್ರದಲ್ಲಿ ನಮೂದು ಇರುವ ಘಟನೆ ದಿನಾಂಕ ಮತ್ತು ಪಾಟೀಸವಾಲಿನಲ್ಲಿ ಹೇಳಿರುವ ಘಟನೆ ದಿನಾಂಕ ತಾಳೆ ಇರುವುದಿಲ್ಲ ಎಂದರೆ ಸಾಕ್ಷಿ ಇದೆ ಎಂದು ನುಡಿಯುತ್ತಾರೆ. ಘಟನಾ ಸ್ಥಳಕ್ಕೆ ಪೋಲಿಸರು ಬಂದಿದ್ದರು ಎಂದು ಹೇಳಿದ್ದು ನೀವು ಸ್ಥಳದಲ್ಲಿ ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ಘಟನಾ ಸ್ಥಳದಲ್ಲಿ ಏನು ಮಾಡಿರುತ್ತಾರೆ ಎಂದರೆ ಸಾಕ್ಷಿ ಬರೆದು ಸಹಿ ಪಡೆದಿರುತ್ತಾರೆ ಎಂದು ನುಡಿಯುತ್ತಾರೆ. ಪೋಲಿಸರು ಘಟನಾ ಸ್ಥಳಕ್ಕೂ ಬಂದಿರುವುದಿಲ್ಲ ಹಾಗೂ ನೀವು ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಮುದ್ದೆಮಾಲು 1 ಎಲ್ಲಾ ತೋಟಗಳಲ್ಲೂ ಸಿಗುತ್ತವೆ ಎಂದರೆ ಸಾಕ್ಷಿ ಸಿಗುತ್ತವೆ ಎಂದು ನುಡಿಯುತ್ತಾರೆ. ಮುದ್ದೆಮಾಲು 1 ರಿಂದಲೇ ಹಲ್ಲೆ ಮಾಡಿರುತ್ತಾರೆ ಎಂದು ಏನಾದರೂ ಗುರುತು ಇಟ್ಟುಕೊಂಡಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ದಿನಾಂಕ 27.08.2023 ರಂದು ಘಟನೆ ನಡೆದಿರುತ್ತದೆ ಎಂದು ಸುಳ್ಳ ಹೇಳುತ್ತಿದ್ದು

ಯಾವುದೇ ಘಟನೆ ನಡೆದಿರುವುದಿಲ್ಲ ಆರೋಪಿಗಳ ವಿರುದ್ದ ಇರುವ ವೈಮನಸ್ಸಿ ನಿಂದ ಸುಳ್ಳು ದೂರನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ನಿಮ್ಮ ಜುಟ್ಟು ಹಿಡಿದು ಎಳೆದಾಡಿ ಬಟ್ಟೆಯನ್ನು ಹರಿದು ಹಾಕಿರುತ್ತಾರೆ ಎಂದು ಹೇಳಿದ್ದು ನಿಮ್ಮ ಹರಿದ ಬಟ್ಟೆಯನ್ನು ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಆರೋಪಿಗಳ ವಿರುದ್ದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

ಮರು ವಿಚಾರಣೆ ಃ- ಇರುವುದಿಲ್ಲ.

ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,

ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.